ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಮಂಗಳವಾರ, ದಿನಾಂಕ : 24 ನೇ ಮಾರ್ಚ್, 2020

ಗಣಿ ಮತ್ತು ಭೂ ವಿಜ್ಞಾನ ಇಲಾಖೆಗಳಲ್ಲಿ ಭ್ರಷ್ಟಾಚಾರ ಮತ್ತು ಅವ್ಯವಹಾರಗಳ ಬಗ್ಗೆ

ಶ್ರೀ ಮರಿತಿಬ್ಬೇಗೌಡ(ಶಿಕ್ಷಕರ ಕ್ಷೇತ್ರ):-

226 (1864) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಳೆದ ಐದು ವರ್ಷಗಳಲ್ಲಿ ಗಣಿ ಮತ್ತು ಭೂ ವಿಜ್ಞಾನ ಇಲಾಖೆಯಲ್ಲಿ ನಡೆದಿರುವ ಭ್ರಷ್ಟಾಚಾರ ಮತ್ತು ಅವ್ಯವಹಾರಗಳ ಪ್ರಕರಣಗಳು ಎಷ್ಟು ; (ಪ್ರಕರಣಗಳ ವಿವರ, ದಿನಾಂಕವಾರು ಮಾಹಿತಿ ನೀಡುವುದು) ಈ ಪ್ರಕರಣಗಳಲ್ಲಿ ಭಾಗಿಯಾಗಿರುವ ಗಣಿ ಮತ್ತು ಭೂ ವಿಜ್ಞಾನ ಇಲಾಖೆಯ ಅಧಿಕಾರಿ/ನೌಕರರ ಹೆಸರು, ಹುದ್ದೆವಾರು ವಿವರ ನೀಡುವುದು ;

(ಆ) ಪ್ರಕರಣದಲ್ಲಿ ಭಾಗಿಯಾದ ಅಧಿಕಾರಿ/ನೌಕರರು ಪ್ರಸ್ತುತ ಕಾರ್ಯ ನಿರ್ವಹಿಸುತ್ತಿರುವವರ ವಿವರ ನೀಡುವುದು ; (ಎರವಲು/ಓಓಡಿ ಮೇಲೆ ನಿಯೋಜನೆಗೊಂಡಿದ್ದಲ್ಲಿ, ಇಲಾಖೆ, ಕರ್ತವ್ಯ ನಿರ್ವಹಿಸುತ್ತಿರುವ ಹುದ್ದೆವಾರು ಮಾಹಿತಿ ನೀಡುವುದು)

(ಇ) ಸದರಿ ಪ್ರಕರಣಗಳ ವಿಚಾರಣೆ ಯಾವ ಹಂತದಲ್ಲಿದೆ ; (ವಿವರ ನೀಡುವುದು) ಇವುಗಳಲ್ಲಿ ನ್ಯಾಯಾಲಯಕ್ಕೆ ಆರೋಪ ಪಟ್ಟಿ ಸಲ್ಲಿಸಿರುವ ಪ್ರಕರಣಗಳೆಷ್ಟು; (ಪ್ರಕರಣವಾರು ವಿವರ ನೀಡುವುದು)

(ಈ) ಪ್ರಕರಣಗಳಲ್ಲಿ ಭಾಗಿಯಾದ ಎಷ್ಟು ಅಧಿಕಾರಿ/ನೌಕರರಿಗೆ ನಿಯಮಾವಳಿಗಳನ್ವಯ ಶಿಸ್ತು ಕ್ರಮ ಜರುಗಿಸಲಾಗಿದೆ ; ಕೈಗೊಂಡ ಶಿಸ್ತು ಕ್ರಮಗಳ ವಿವರಗಳನ್ನು ಹೆಸರು, ಹುದ್ದೆವಾರು ನೀಡುವುದು ;

(ಉ) ಭ್ರಷ್ಟಾಚಾರ ಮತ್ತು ಅವ್ಯವಹಾರಗಳು ಮರುಕಳಿಸದಂತೆ ಸರ್ಕಾರ ಕೈಗೊಂಡ ಸಮಗ್ರ ಕ್ರಮಗಳೇನು ? (ವಿವರ ನೀಡುವುದು)